**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು</u>**

**<u>ಸಿಸಿ ಸಂಖ್ಯೆ: 347/2026</u>**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ಹುಲ್ಲಹಳ್ಳಿ ಪೊಲೀಸ್ ಠಾಣೆ, ನಂಜನಗೂಡು.

ವಿರುದ್ಧ

**ಆರೋಪಿ** : ಶ್ರೀ.ನಾಗರಾಜು

:: **<u>ಆಪಾದನೆ</u>** ::

**ಶ್ರೀ**ಮತಿ.ಸರಿತ ಕುಮಾರಿ ಎ.ಎಂ. **ಬಿ.ಎ., ಎಲ್.ಎಲ್.ಬಿ.,** 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗು ಪ್ರಭಾರ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿಯಾದ.-

ಶ್ರೀ.ನಾಗರಾಜು
ವಯಸ್ಸು ಸುಮಾರು 29 ವರ್ಷ,
ವಾಸಃ ಮಹದೇವನಗರ ಗ್ರಾಮ, ಹಂಪಪುರ ಹೋಬಳಿ,
ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು.

ನಿವಾಸಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ದಿನಾಂಕ 02.01.2026 ರಂದು ಬೆಳಿಗ್ಗೆ 9.15 ಗಂಟೆ ಸಮಯದಲ್ಲಿ ಹುಲ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಹುಲ್ಲಹಳ್ಳಿ ಗ್ರಾಮದ ಮೈಸೂರು ಮುಖ್ಯ ರಸ್ತೆಯ ಕಪಿಲ ಬ್ರಿಡ್ಜ್ ನ ಹತ್ತಿರವಿರುವ ದೊಡ್ಡಮ್ಮ ತಾಯಿ ಪಿಶ್ ಲ್ಯಾಂಡ್ ಬಳಿ ಸಾರ್ವಜನಿಕ ಸ್ಥಳದಲ್ಲಿ ಆರೋಪಿಯಾದ ನೀವು ಯಾವುದೇ ಪರವಾನಿಗೆ ಇಲ್ಲದೇ ಅಕ್ರಮವಾಗಿ ಮದ್ಯ ಸೇವಿಸಲು ಅವಕಾಶ ಮಾಡಿಕೊಟ್ಟು, ಸಾರ್ವಜನಿಕರಿಗೆ ಮದ್ಯವನ್ನು ಕುಡಿಯಲು ಪ್ರಚೋದನೆ ನೀಡಿದ್ದು, ಆ ಮೂಲಕ ಆರೋಪಿಯಾದ ನೀವು ಅಬಕಾರಿ ಕಾಯ್ದೆ ಕಲಂ-15(ಎ) ಮತ್ತು 32(3) ರಂತೆ ಶಿಕ್ಷಾರ್ಹ ಅಪರಾಧ ಎಸಗಿದ್ದೀರೆಂದು ನಿಮ್ಮ ಮೇಲೆ ಆಪಾದನೆ ಇದೆ.

ಪ್ರಶ್ನೆ:1– ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯನ್ನು ಅರ್ಥಮಾಡಿಕೊಂಡಿರುವಿರಾ ?

ಆರೋಪಿಯ ಉತ್ತರಃ

ಪ್ರಶ್ನೆ:2– ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ ?

ಆರೋಪಿಯ ಉತ್ತರಃ

(ಆರೋಪಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ಆಪಾದನೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಯು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 07.03.2026

(ಸರಿತ ಕುಮಾರಿ ಎ.ಎಂ)
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗು
ಪ್ರಭಾರ ಪ್ರಧಾನ ಸಿ.ಜೆ. ಮತ್ತು ಪ್ರ.ದ.ನ್ಯಾ.ದಂ.
ನಂಜನಗೂಡು.